ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	685
ಸದಸ್ಯರ ಹೆಸರು	ಶ್ರೀ.ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	17.09.2021
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಸಿರಿಧಾನ್ಯ ಬೆಳೆಗಾರರಿಗೆ ಯಾವ ಯಾವ ಸವಲತ್ತುಗಳನ್ನು ಸರ್ಕಾರವು ನೀಡುತ್ತಿದೆ: (ಸವಲತ್ತುವಾರು ವಿವರ ನೀಡುವುದು)	ರಾಜ್ಯದಲ್ಲಿ ಸಿರಿಧಾನ್ಯಗಳಾದ ನವಣೆ, ಹಾರಕ ಸಾಮೆ, ಕೊರಲೆ, ಬರಗು ಮತ್ತು ಊದಲು ಬೆಳೆಗಳನ್ನು (ರಾಗಿ, ಜೋಳ ಮತ್ತು ಸಜ್ಜೆ ಹೊರತುಪಡಿಸಿ) ಬೆಳೆಯುವ ಸಿರಿಧಾನ್ಯ ಬೆಳೆಗಾರರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಗರಿಷ್ಠ ಎರಡು ಹೆಕ್ಟೇರ್ ಗೊಳಪಟ್ಟು ಪ್ರತೀ ಹೆಕ್ಟೇರ್‌ಗೆ ರೂ.10000 ಗಳಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.
ಆ.	ಈ ಸವಲತ್ತುಗಳನ್ನು ಪಡೆಯಲು ಬೆಳೆಗಾರರು ಮಧ್ಯವರ್ತಿಗಳ ಹಾವಳಿಯಿಂದ ಸಮಸ್ಯೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಸಿರಿಧಾನ್ಯ ಬೆಳೆದ ರೈತ ಫಲಾನುಭವಿಗಳಿಗೆ ರೂ.10,000/ಹೆಕ್ಟೇರ್ ರಂತೆ ಪ್ರೋತ್ಸಾಹಧನವನ್ನು ನೇರ ಸೌಲಭ್ಯ ವರ್ಗಾವಣೆ ಮೂಲಕ (Direct Benefit Transfer) ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಮುಂದುವರೆದು, ರಾಜ್ಯದ ಸಾವಯವ/ಸಿರಿಧಾನ್ಯ ಬೆಳೆಗಾರರು ತಾವು ಬೆಳೆದ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಹಾಗೂ ಉತ್ತಮ ಧಾರಣೆ ದೊರಕಿಸಿಕೊಡುವ ನಿಟ್ಟಿನಲ್ಲಿ ರಾಜ್ಯದ್ಯಾಂತ ಎಲ್ಲಾ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳನ್ನು ಈಗಾಗಲೇ 2016-17ನೇ ಸಾಲಿನಲ್ಲಿ ರಚಿಸಲಾಗಿದೆ. ಈ ಒಕ್ಕೂಟಗಳ ಮೂಲಕ ಸದಸ್ಯ ರೈತರು ಉತ್ಪಾದಿಸಿದ ಸಾವಯವ ಉತ್ಪನ್ನಗಳ ಸಂಸ್ಕರಣೆ, ವರ್ಗೀಕರಣ, ಮೌಲ್ಯವರ್ಧನೆ, ಪ್ಯಾಕಿಂಗ್ ಮತ್ತು ಮಾರಾಟ ವ್ಯವಸ್ಥೆ ಕಲ್ಪಿಸಿಕೊಡಲಾಗಿದೆ. ಈ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಪೈಕಿ 6 ಒಕ್ಕೂಟಗಳು ಸಿರಿಧಾನ್ಯಗಳ ಖರೀದಿ, ಸಂಸ್ಕರಣೆ ಹಾಗೂ ಮಾರಾಟದಲ್ಲಿ ತೊಡಗಿಸಿಕೊಂಡಿರುತ್ತವೆ. ರಾಜ್ಯದ ಸಿರಿಧಾನ್ಯ ಉತ್ಪನ್ನಗಳಿಗೆ ನೇರ ಮಾರುಕಟ್ಟೆ ಒದಗಿಸಿಕೊಡುವ ನಿಟ್ಟಿನಲ್ಲಿ ತಾಲ್ಲೂಕು/ಜಿಲ್ಲೆ/ರಾಜ್ಯ/ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟಗಳಲ್ಲಿ ಹಲವಾರು ಮೇಳಗಳನ್ನು ಆಯೋಜಿಸಿ /ಭಾಗವಹಿಸಿ ಮಾರುಕಟ್ಟೆ ಸಂಪರ್ಕವನ್ನು ಕಲ್ಪಿಸಿಕೊಡಲಾಗಿದೆ.
ಇ)	ಹಾಗಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	
ಈ	ಕಳೆದ ಮೂರು ವರ್ಷದಲ್ಲಿ ಸಿರಿಧಾನ್ಯ ಮೇಳಕ್ಕೆ ವ್ಯಯಿಸಿರುವ ಹಣವೆಷ್ಟು? (ಸಿರಿಧಾನ್ಯ ಮೇಳವಾರು ವಿವರ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ಸಿರಿಧಾನ್ಯ ಮೇಳಕ್ಕೆ ವ್ಯಯಿಸಿರುವ ಅನುದಾನದ ವಿವರಗಳನ್ನು ಈ ಕೆಳಗಿನಂತೆ ನೀಡಲಾಗಿದೆ. 1. 2020-21 ನೇ ಸಾಲಿನಲ್ಲಿ ಮೇಳ ಆಯೋಜಿಸಿರುವುದಿಲ್ಲ. 2. 2019-20 ನೇ ಸಾಲಿನಲ್ಲಿ ಮೇಳ ಆಯೋಜಿಸಿರುವುದಿಲ್ಲ. 3. 2018-19 ನೇ ಸಾಲಿನಲ್ಲಿ "ಸಾವಯವ ಮತ್ತು ಸಿರಿಧಾನ್ಯ- 2019" ಅಂತರಾಷ್ಟ್ರೀಯ ವಾಣಿಜ್ಯ ಮೇಳದ ಆಯೋಜನೆಗೆ ರೂ 800.00 ಲಕ್ಷಗಳನ್ನು ವ್ಯಯಿಸಲಾಗಿರುತ್ತದೆ.

ಸಂಖ್ಯೆ: AGRI-ACT/126/ 2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು